## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಮುರಳಿಧರ್ ದೇಶಪಾಂಡೆ, ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಹುನಗುಂದ, ಇವರ ವಿರುದ್ಧ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರವರಿಗೆ ವಹಿಸುವ ಕುರಿತು.

**ಓದಲಾಗಿದೆ:** 1. ಮಾನ್ಯ ಉಪಲೋಕಾಯುಕ್ತರು, ಇವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರಡಿ ಸಲ್ಲಿಸಿರುವ ವರದಿಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಬಿಜಿಎಮ್/2613/2016/ಎಆರ್‌ಇ-5, ದಿನಾಂಕ: 24.12.2016.

2. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಅ.ಸ.ಪತ್ರ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ಬಿಜಿಎಮ್/2613/2016/ಎಆರ್‌ಇ-5, ದಿನಾಂಕ: 27.12.2016

****

**ಪ್ರಸ್ತಾವನೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರು ಮೇಲೆ ಓದಲಾದ(2)ರಲ್ಲಿ ಓದಲಾದ ಪತ್ರದೊಂದಿಗೆ, ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ 12(3) ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರವರು ಮೇಲೆ(1) ರಲ್ಲಿ ಓದಲಾದಂತೆ ನೀಡಿರುವ ವರದಿ ಹಾಗೂ ಇತರ ದಾಖಲೆಗಳನ್ನು ಸರ್ಕಾರಕ್ಕೆ ಕಳುಹಿಸಿ, ಸದರಿ ವರದಿಯಲ್ಲಿನ ಶಿಫಾರಸ್ಸಿನಂತೆ ಕ್ರಮ ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ತಿಳಿಸುವಂತೆ ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರವರ ವರದಿ ಹಾಗೂ ಇತರೆ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿದೆ. ಹುನಗುಂದ ತಾಲ್ಲೂಕು ಪಂಚಾಯತ್ ಪಂಚಾಯತ್ ವ್ಯಾಪ್ತಿಯ 2015-16ನೇ ಸಾಲಿನಲ್ಲಿ ಎಸ್‌ಸಿಪಿ ಮತ್ತು ಎಸ್.ಟಿ.ಪಿ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸದೇ ಹಣವನ್ನು ತೆಗೆದಿರುತ್ತಾರೆಂದು, ಆರೋಪಿಸಿ ಇಲಕಲ್ ಗ್ರಾಮದ ನಿವಾಸಿಯಾದ ಶ್ರೀ ಮುತ್ತುರಾಜ ಹುಲಗಪ್ಪ ಚಲವಾದಿ, ಇವರು ಶ್ರೀ ಮುರಳೀಧರ್ ದೇಶಪಾಂಡೆ, ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಹುನಗುಂದ, ಇವರ ವಿರುದ್ಧ ನೀಡಿದ್ದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 9 ರನ್ವಯ ತನಿಖೆಗೆ ಕೈಗೆತ್ತಿಕೊಳ್ಳಲಾಗಿರುತ್ತದೆ ಎಂದು ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿ ನಮೂದಿಸಲಾಗಿರುತ್ತದೆ.

ದೂರುದಾರರ ದೂರಿನ ಬಗ್ಗೆ ಎದುರುದಾರರಿಗೆ ಉತ್ತರವನ್ನು ನೀಡುವಂತೆ ದಿನಾಂಕ: 07.11.2016ರ ಪತ್ರದಲ್ಲಿ ಸೂಚಿಸಲಾಗಿದ್ದು, ಇದಕ್ಕೆ ಪ್ರತಿಕ್ರಿಯೆಯಾಗಿ ಅಧಿಕಾರಿಯು ಯಾವುದೇ ಉತ್ತರವನ್ನು ನೀಡಿರುವುದಿಲ್ಲವೆಂದು, ಮತ್ತು ದೂರುದಾರರು ರಸ್ತೆ ಕಾಮಗಾರಿಯ ಪೋಟೋ ಪ್ರತಿಯನ್ನು ಸಲ್ಲಿಸಿದ್ದು, ಸದರಿ ಪೋಟೊದಲ್ಲಿ ರಸ್ತೆ ಕಾಮಗಾರಿಯನ್ನು ನಿರ್ವಹಿಸದೇ ಇರುವುದು ಮತ್ತು ರಸ್ತೆಯು ದುಸ್ಥಿತಿಯಲ್ಲಿರುವುದು, ಎದುರುದಾರರು ಕಾಮಗಾರಿಯನ್ನು ನಿರ್ವಹಿಸದೇ ಹಣಸೆಳೆದಿರುವುದನ್ನು ತಳ್ಳಿ ಹಾಕದೇ ಇರುವುದರಿಂದ, ಕಾಮಗಾರಿಯ ಪೋಟೋ ಪ್ರತಿಗಳನ್ನು ನಂಬದೇ ಇರಲು ಹಾಗೂ ಕಾಮಗಾರಿಯನ್ನು ನಿರ್ವಹಿಸಿದೆ ಹಣದುರುಪಯೋಗ ಪಡಿಸಿಕೊಂಡಿರುವುದನ್ನು ನಂಬದಿರಲು ಯಾವುದೇ ಕಾರಣಗಳು ಇಲ್ಲವೆಂದು ತಮ್ಮ ವರದಿಯಲ್ಲಿ ನಮೂದಿಸುತ್ತಾ,, ತನಿಖಾ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ, ಎದುರುದಾರರಾದ ಶ್ರೀ ಮುರಳೀಧರ ದೇಶಪಾಂಡೆ, ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಹುನಗುಂದ, ಇವರು ಸರ್ಕಾರಿ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವೆಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿಗಳು 1966ರ ನಿಯಮ 3(i)(ii) (iii)ರನ್ನು ಉಲ್ಲಂಘಿಸಿರುವುದರಿಂದ, ಸದರಿ ಅಧಿಕಾರಿಯ ವಿರುದ್ಧ ಇಲಾಖಾ ವಿಚಾರಣೆಯನ್ನು ಕೈಗೊಳ್ಳಲು ಪ್ರಕರಣವನ್ನು ತಮಗೆ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 14(ಎ) ರನ್ವಯ ವಹಿಸಿಕೊಡುವಂತೆ, ಮಾನ್ಯ ಉಪಲೋಕಾಯುಕ್ತರು ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3) ರನ್ವಯ ಮಾಡಿರುವ ಶಿಫಾರಸ್ಸನ್ನು ಕಳುಹಿಸಿಕೊಡುತ್ತಾ, ಅಂತೆಯೇ ಕ್ರಮವಹಿಸುವಂತೆ ಅಪರ ನಿಬಂಧಕರು, ರವರು ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರ ವರದಿ ಹಾಗೂ ಶಿಫಾರಸ್ಸು ಅದರೊಂದಿಗಿನ ದಾಖಲಾತಿಗಳನ್ನು ಪರಿಶೀಲಿಸಲಾಗಿ, ಎದುರುದಾರರು ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಲೋಪವೆಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ. ಆದುದರಿಂದ, ಮಾನ್ಯ ಉಪ ಲೋಕಾಯುಕ್ತ-1 ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆಯ 1984ರ ಕಲಂ 12(3) ರನ್ವಯ, ಮಾಡಿರುವ ಶಿಫಾರಸ್ಸಿನಂತೆ, ಶ್ರೀ ಮುರಳಿಧರ್ ದೇಶಪಾಂಡೆ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಹುನಗುಂದ, ಇವರ ವಿರುದ್ಧದ ಆರೋಪಗಳ ಸಂಬಂಧ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ರನ್ವಯ

ಜರುಗಿಸಲು ಪ್ರಕರಣವನ್ನು ಅದೇ ನಿಯಮಾವಳಿಗಳ ನಿಯಮ 14(ಎ) ರನ್ವಯ ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 24 ವಿಸೇಬಿ 2017 ಬೆಂಗಳೂರು ದಿನಾಂಕ: 06-02-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, ಶ್ರೀ ಮುರಳಿಧರ್ ದೇಶಪಾಂಡೆ, ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಹುನಗುಂದ, ಇವರ ವಿರುದ್ಧದ ಆರೋಪಗಳ ಸಂಬಂಧ ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 11 ಮತ್ತು 11(ಎ) ರನ್ವಯ ಸಮಗ್ರವಾದ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಕರಣವನ್ನು ಅದೇ ನಿಯಮಾವಳಿಗಳ ನಿಯಮ-14(ಎ)ರ ಪ್ರಕಾರ ಮಾನ್ಯ ಉಪಲೋಕಾಯುಕ್ತರು-1 2 ~~1~~, ಕರ್ನಾಟಕ ಲೋಕಾಯುಕ್ತ ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

06/02/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು-1 ಕರ್ನಾಟಕ ಲೋಕಾಯುಕ್ತ, ಬೆಂಗಳೂರು
3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಬಾಗಲಕೋಟೆ
5) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು-01
4) ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಸಿ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಪ್ರತಿ ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ (ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.